# ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಯಶಸ್ವಿ

ಸುಡಿಜೇನು ವರದಿ

**ಹಳಿಯಾಳ:** ಶಾಸಕರು ಹಾಗೂ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರಾದ ಆರ್ ವಿ ದೇಶಪಾಂಡೆಯವರ ಜನ್ಮದಿನದ ಪ್ರಯುಕ್ತ ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಎನ್‌ಎಸ್‌ಎಸ್ ಘಟಕ ಮತ್ತು ವಿಆರ್‌ಡಿಎಂ ಟ್ರಸ್ಟ್‌ನ ಜಂಟಿ ಸಯೋಗದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.

ಪದ್ಮಶ್ರೀ ಆರ್.ಬಿ ಪಾಟೀಲ್ ಕ್ಯಾನ್ಸರ್ ಹಾಸ್ಪಿಟಲ್‌ಗೆ ಡಾ. ಉಮೇಶ್‌ಹಳ್ಳಿ ಕೇರಿಯವರು ಅತಿಥಿಗಳಾಗಿ ಈ ಶಿಬಿರಕ್ಕೆ ಆಗಮಿಸಿ, ರಕ್ತದಾನ ಮಹಾದಾನವಾಗಿದ್ದು, ರಕ್ತದಾನದಿಂದ ಜೀವವನ್ನು ಉಳಿಸಬಹುದಾಗಿದೆ. ಉತ್ತಮ ರಕ್ತವನ್ನು ಹೊಂದಲು ವಿದ್ಯಾರ್ಥಿಗಳು ಮಾದಕ ವ್ಯಸನ ಸೇವಿಸದಂತೆ ಕಿವಿಮಾತು ಹೇಳಿದರು.

ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ಅಧ್ಯಕ್ಷತೆವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಬೇಕೆಂದು ಹೇಳಿದರು.

ನಲವತ್ತಕ್ಕೂ ಅಧಿಕ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಿದರು.

ವಿಆರ್‌ಡಿಎಂ ಟ್ರಸ್ಟ್‌ನ ಪ್ರಕಾಶ್ ಪ್ರಭು ಹಾಗೂ ಎನ್‌ಎಸ್‌ಎಸ್ ಘಟಕದ ಸಂಚಾಲಕ ಪ್ರೊ. ಸಂತೋಷ ಸವಣೂರ್ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಪ್ರತಿ ವರ್ಷವು ಆರ್.ವಿ ದೇಶಪಾಂಡೆಯವರ ಜನ್ಮದಿನದ ಪ್ರಯುಕ್ತ ಮಹಾವಿದ್ಯಾಲಯದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗುತ್ತಿದೆ ಎಂದು ಪ್ರಾಚಾರ್ಯ ಡಾ.ವಿ.ಎ ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಕ್ತದಾನ ಶಿಬಿರ ಯಶಸ್ವಿ

**ಶಿರಸಿ ಸಮಾಚಾರ ⏭ ಹಳಿಯಾಳ:** ಶಾಸಕ ಹಾಗೂ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್ ವಿ ದೇಶಪಾಂಡೆಯವರ ಜನ್ಮದಿನದ ಪ್ರಯುಕ್ತ ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಮಾರ್ಚ್ 18ರಂದು ಆಯೋಜಿಸಲಾಗಿತ್ತು.

ಪದ್ಮಶ್ರೀ ಆರ್.ಬಿ.ಪಾಟೀಲ್ ಕ್ಯಾನ್ಸರ್ ಹಾಸ್ಪಿಟಲ್ ನವನಗರದ ಡಾ. ಉಮೇಶ್ ಹಳ್ಳಿಕೇರಿಯವರು ಅತಿಥಿಗಳಾಗಿ ಈ ಶಿಬಿರಕ್ಕೆ ಆಗಮಿಸಿದ್ದರು. ರಕ್ತದಾನ ಮಹಾದಾನವಾಗಿದ್ದು, ರಕ್ತದಾನದಿಂದ ಜೀವವನ್ನು ಉಳಿಸಬಹುದಾಗಿದೆ ಎಂದರು. ಉತ್ತಮ ರಕ್ತವನ್ನು ಹೊಂದಲು ವಿದ್ಯಾರ್ಥಿಗಳು ಮಾದಕ ವ್ಯಸನ ಸೇವಿಸದಂತೆ ಕಿವಿಮಾತು ಹೇಳಿದರು.

ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ಮಾತನಾಡಿ, ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಬೇಕೆಂದು ಹೇಳಿದರು.

ನಲವತ್ತಕ್ಕೂ ಅಧಿಕ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿ ಸಮಾಜಕ್ಕೆ ಕೊಡುಗೆ ನೀಡಿದರು. ವಿಆರ್‌ಡಿಎಂಟ್ರಸ್ಟ್ ಪ್ರಕಾಶ್ ಪ್ರಭು ಹಾಗೂ ಎನ್‌ಎಸ್‌ಎಸ್ ಘಟಕದ ಸಂಚಾಲಕ ಪ್ರೊ. ಸಂತೋಷ ಸವಣೂರ್ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕ ಮತ್ತು ವಿಆರ್‌ಡಿಎಂ ಟ್ರಸ್ಟ್‌ನ ಜಂಟಿ ಸಯೋಗದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. ಪ್ರತಿ ವರ್ಷವು ಶ್ರೀ. ಆರ್ ವಿ ದೇಶಪಾಂಡೆಯವರ ಜನ್ಮದಿನದ ಪ್ರಯುಕ್ತ ಮಹಾವಿದ್ಯಾಲಯದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗುತ್ತಿದೆ ಎಂದು ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.